# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1041 |
| ಸದಸ್ಯರ ಹೆಸರು | : | ಶ್ರೀ.ಬಿ.ಎಂ. ಫಾರೂಖ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |
| ಉತ್ತರಿಸುವ ದಿನಾಂಕ | : | 24.02.2023 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ರಾಜ್ಯದ ಆರ್ಥಿಕತೆಗೆ ಅಡಿಕೆ ಬೆಳೆಯುವ ಮೂಲಕ ಉತ್ತಮ ಕೊಡುಗೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಹಾಗಿದ್ದಲ್ಲಿ, ಹಳದಿ ರೋಗ ಮತ್ತು ಎಲೆ ಚುಕ್ಕೆ ರೋಗ ತಡೆಗಟ್ಟಲು ಹಾಗೂ ಅಡಿಕೆ ಕೃಷಿಯನ್ನು ಸುಧಾರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; | ಸರ್ಕಾರದಿಂದ ಕೈಗೊಂಡಿರುವ ಕ್ರಮಗಳು ಈ ಕೆಳಗಿನಂತಿವೆ.<br>1) ಅಡಿಕೆ ಎಲೆ ಚುಕ್ಕೆ ರೋಗ ಭಾದಿತ ರೈತರಿಗೆ ಉಚಿತವಾಗಿ ಪ್ರತಿ ಹೆಕ್ಟೇರ್‌ಗೆ ರೂ.4000.00 ಗಳಂತೆ ರೂ. 200.00 ಲಕ್ಷಗಳ ವೆಚ್ಚದಲ್ಲಿ ಸಸ್ಯ ಸಂರಕ್ಷಣಾ ಔಷಧಿಗಳನ್ನು 17264 ರೈತರಿಗೆ ವಿತರಿಸಲಾಗಿದೆ.<br>2) ಅಡಿಕೆ ಎಲೆಚುಕ್ಕೆ ರೋಗದ ನಿಯಂತ್ರಣದ ಕುರಿತು ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ.<br>3) ರೋಗದ ನಿಯಂತ್ರಣ ಕುರಿತು ತಜ್ಞರು ಹಾಗೂ ಅಧಿಕಾರಿಗಳ ಸಹಯೋಗದೊಂದಿಗೆ ತರಬೇತಿ ಹಾಗೂ ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗಿದೆ.<br>4) ಅಡಿಕೆ ಎಲೆಚುಕ್ಕೆ ಮತ್ತು ಹಳದಿ ಎಲೆ ರೋಗ ನಿಯಂತ್ರಣಕ್ಕಾಗಿ ಹೆಚ್ಚಿನ ಸಂಶೋಧನೆಗಾಗಿ ರೂ. 50.00 ಲಕ್ಷಗಳನ್ನು, ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ಜಿಲ್ಲೆಗೆ ಒದಗಿಸಲಾಗಿದೆ.<br>5) ಅಡಿಕೆ ಬೆಳೆಯ ಹಳದಿ ಎಲೆ ರೋಗ ನಿಯಂತ್ರಣಕ್ಕಾಗಿ ಪರ್ಯಾಯ ತೋಟಗಾರಿಕೆ ಬೆಳೆಗಳಾದ ಕೋಕೋ, ಕಾಳಮೆಣಸು, ತಾಳೆ ಬೆಳೆ, ಕಾಫಿ, ಬಾಳೆ, ತೆಂಗು, ಜಾಯಿಕಾಯಿ, ಬೆಣ್ಣೆ ಹಣ್ಣು ಇತ್ಯಾದಿ ಬೆಳೆಗಳನ್ನು ಬೆಳೆಯಲು ಪ್ರತಿ ಹೆಕ್ಟೇರ್‌ಗೆ ರೂ.15,000/-ಗಳಂತೆ ಗರಿಷ್ಟ 2 ಹೆಕ್ಟೇರ್‌ಗಳವರೆಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ.<br>6) ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ (RWBCIS) ಅಡಿಕೆ ಬೆಳೆಯನ್ನು ಸಹ ಅಳವಡಿಸಲಾಗಿದ್ದು, ವಿವಿಧ ಹವಾಮಾನ ಅಂಶಗಳಾದ ಮಳೆ, ತಾಪಮಾನ, ಸಾಪೇಕ್ಷ ಆರ್ದ್ರತೆ ಇತ್ಯಾದಿ ಅಂಶಗಳನ್ನು ಪರಿಗಣಿಸಿ ಇವುಗಳ ಸಂಯೋಜನೆಯಿಂದ ಬೆಳೆಯ ಬೆಳವಣಿಗೆ, ಉತ್ಪಾದನೆ ಮತ್ತು ಇಳುವರಿಯ ಮೇಲೆ ಉಂಟಾಗಬಹುದಾದ ಪರಿಣಾಮಗಳನ್ನು ವೈಜ್ಞಾನಿಕ |
| ಇ) | ಸಾವಿರಾರು ಬೆಳೆಗಾರರು ಅಡಿಕೆ ಕೃಷಿಗೆ ಬಂದ ರೋಗದಿಂದ ತೀವ್ರ ನಷ್ಟ ಅನುಭವಿಸಿ ತುಂಬಾ ತೊಂದರೆಯಲ್ಲಿರುವುದರಿಂದ, ಅಂತಹವರುಗಳಿಗೆ ಪರಿಹಾರ ನೀಡುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | |
| ಈ) | ಅಡಿಕೆ ಕೃಷಿಯನ್ನು ಲಾಭದಾಯಕ ಉದ್ಯಮವಾಗಿಸಲು ಸರ್ಕಾರದ ಯೋಜನೆಗಳೇನು? | |

| | | |
|---|---|---|
| | | ರೀತಿಯಲ್ಲಿ ವಿಶ್ಲೇಷಿಸಿ ಇದರಲ್ಲಿ ರೋಗ ಮತ್ತು ಕೀಟಗಳಿಗೆ ಪೂರಕವಾದ ಅಂಶಗಳನ್ನು ಸಹ ಅಳವಡಿಸಿ ಅವುಗಳಿಂದಾಗಬಹುದಾದ ನಷ್ಟವನ್ನು ಪರಿಗಣಿಸುವ ಬಗ್ಗೆ ಅಡಿಕೆ ಬೆಳೆಯನ್ನು ವಿಮಾ ವ್ಯಾಪ್ತಿಗೆ ಒಳಪಡಿಸಲಾಗಿದೆ.<br>7) ಅಡಿಕೆ ಬೆಳೆ ಸೇರಿದಂತೆ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಿಗೆ ಹಾನಿ ಉಂಟಾದ ಸಂದರ್ಭದಲ್ಲಿ NDRF /SDRF ಮಾರ್ಗಸೂಚಿಗಳನ್ವಯ ಕಂದಾಯ ಇಲಾಖೆಯ ಮೂಲಕ ಬಹುವಾರ್ಷಿಕ ತೋಟಗಾರಿಕೆ ಬೆಳೆಗಳಿಗೆ ಪ್ರತಿ ಹೆಕ್ಟೇರ್‌ಗೆ ರೂ.28,000/-ಗಳಂತೆ 2 ಹೆಕ್ಟೇರ್‌ಗಳಿಗೆ ಪರಿಹಾರ ನೀಡಲಾಗುತ್ತಿದೆ.<br>8) ಪ್ರಸಕ್ತ ಸಾಲಿನಲ್ಲಿ ಅಡಿಕೆ ಬೆಳೆಯ ಕಟಾವು ಹಾಗೂ ಸಿಂಪರಣೆಗಾಗಿ (ದೋಟಿ) ಖರೀದಿಸಿದ ಅಡಿಕೆ ಬೆಳೆಗಾರರಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿ ಅನುಸಾರ ಸಹಾಯಧನ ನೀಡಲಾಗುತ್ತಿದೆ.<br>9) ಕೇಂದ್ರ ಸರ್ಕಾರ ನೇಮಿಸಿರುವ ವೈಜ್ಞಾನಿಕ ತಂಡವು ದಿನಾಂಕ: 20 ರಿಂದ 22 ನವೆಂಬರ್-2022ರಲ್ಲಿ ಎಲೆಚುಕ್ಕೆ ರೋಗ ಬಾಧಿತವಾದ ಜಿಲ್ಲೆಗಳಾದ ಶಿವಮೊಗ್ಗ, ದಕ್ಷಿಣ ಕನ್ನಡ ಜಿಲ್ಲೆ ಮತ್ತು ಚಿಕ್ಕಮಗಳೂರು ಜಿಲ್ಲೆಗಳಿಗೆ ಭೇಟಿ ನೀಡಿರುತ್ತದೆ.<br>10) ದಿನಾಂಕ: 04-01-2023 ರಂದು ಶೃಂಗೇರಿಯಲ್ಲಿ ಅಡಿಕೆ ಬೆಳೆ ಕುರಿತಾದ ಸಮಸ್ಯೆಗಳಿಗೆ ವೈಜ್ಞಾನಿಕ ಪರಿಹಾರವನ್ನು ಕಂಡುಕೊಳ್ಳಲು ಒಂದು ದಿನದ Brain Storming Session ಏರ್ಪಡಿಸಲಾಗಿದ್ದು ವಿಜ್ಞಾನಿಗಳು, ರೈತರು ಮತ್ತು ಅಧಿಕಾರಿಗಳು ಭಾಗವಹಿಸಿರುತ್ತಾರೆ.<br>11) ಜನವರಿ- 2023ರ ಮಾಹೆಯಲ್ಲಿ ಕೇಂದ್ರ ಸರ್ಕಾರದ ವತಿಯಿಂದ ವಿಜ್ಞಾನಿಗಳ ತಂಡವು ರಾಜ್ಯದ ಅಡಿಕೆ ಎಲೆಚುಕ್ಕೆ ರೋಗ ಬಾಧಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಹಾರೋಪಾಯಗಳನ್ನು ಶಿಫಾರಸ್ಸು ಮಾಡಿರುತ್ತಾರೆ.<br>12) ಕೇಂದ್ರ ತಜ್ಞರ ತಂಡದ ಶಿಫಾರಸ್ಸಿನಂತೆ ಅಡಿಕೆ ಎಲೆ ಚುಕ್ಕೆ ಮತ್ತು ಹಳದಿ ಎಲೆ ರೋಗ ನಿಯಂತ್ರಣ ಹಾಗೂ ಸಂಶೋಧನೆಗಾಗಿ CPCRI, ಕೊಚ್ಚಿ ರವರ ಮೂಲಕ ಕೇಂದ್ರ ಸರ್ಕಾರಕ್ಕೆ ರೂ. 197.66 ಕೋಟಿಗಳ ಪ್ರಸ್ತಾವನೆ ಸಲ್ಲಿಸಲಾಗಿದೆ ಹಾಗೂ ರೂ. 22.73 ಕೋಟಿಗಳ ಪ್ರಸ್ತಾವನೆಯು ರಾಜ್ಯ ಸರ್ಕಾರದ ಪರಿಶೀಲನೆಯಲ್ಲಿದೆ.<br>13) ಅಡಿಕೆ ಪರ್ಯಾಯ ಉತ್ಪನ್ನಗಳನ್ನು ಉತ್ತೇಜಿಸಿ ಪ್ರಚಾರಪಡಿಸಲು ಖಾಸಗಿ ವಲಯ ಅಭಿವೃದ್ಧಿಪಡಿಸಿರುವ ಸಾಬೂನು, ಬಣ್ಣ, ಸಿರಪ್, ವೈನ್, ಸೊಳ್ಳೆಬತ್ತಿ ಇತ್ಯಾದಿಗಳನ್ನು ತೋಟಗಾರಿಕೆ ಇಲಾಖೆ ಮತ್ತು ಕೃಷಿ ವಿಶ್ವವಿದ್ಯಾಲಯಗಳ ವಿವಿಧ ಮೇಳಗಳಲ್ಲಿ ಪ್ರದರ್ಶಿಸುವುದರ ಮೂಲಕ ಅರಿವು ಮೂಡಿಸಲಾಗುತ್ತಿದೆ. |

**HORTI 109 HGM 2023**

(ಮುನಿರತ್ನ)
ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.